# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1202

ಉತ್ತರಿಸಬೇಕಾದ ದಿನಾಂಕ : 16.03.2021

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಇರುವ ಒಟ್ಟು ನಂದಿನಿ ಬೂತ್‌ಗಳು ಎಷ್ಟು; ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಒಟ್ಟು ನಂದಿನಿ ಬೂತ್ ಗಳೆಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ಬೀದರ್ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಒಟ್ಟು 50 ಸಂಖ್ಯೆ ಪಾರ್ಲರ್ ಇದ್ದು, ತಾಲ್ಲೂಕುವಾರು ಮಾಹಿತಿ ಕೆಳಕಂಡಂತಿದೆ:<br><br>(ಕ್ರ. ಸಂ. / ತಾಲ್ಲೂಕಿನ ಹೆಸರು / ಬೂತ್ ಸಂಖ್ಯೆ)<br>1 ಬೀದರ್ 25<br>2 ಔರದ್ 05<br>3 ಭಾಲ್ಕಿ 10<br>4 ಹುಮನಾಬಾದ್ 06<br>5 ಬಸವಕಲ್ಯಾಣ 04<br>**ಒಟ್ಟು 50** |
| ಆ) | ಬೀದರ್ ಜಿಲ್ಲೆಯಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಬೂತ್/ಪಾರ್ಲರ್‌ಗಳನ್ನು ಹೊಸದಾಗಿ ಪ್ರಾರಂಭಿಸಲು ಇರುವ ಮಾನದಂಡಗಳೇನು; ಫ್ರಾಂಚೈಸಿಯನ್ನು ಪಡೆಯುವವರಿಗೆ ಸಿಗುವ ಸೌಲಭ್ಯಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | 1. ಜನಸಂಖ್ಯೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ರಿಟೇಲ್ ದರದಲ್ಲಿ ಪೂರೈಸಲು ಕ್ರಮಕೈಗೊಳ್ಳಲಾಗುತ್ತಿದೆ.<br><br>2. ಸ್ಥಳೀಯ ಪ್ರದೇಶದಲ್ಲಿರುವ ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನ ಮಾರಾಟ ಮಾಡಲು ಆಸಕ್ತರನ್ನು ಗುರುತಿಸಲಾಗುವುದು, ಹಾಗೂ ಕೆಲವೊಮ್ಮೆ ನೇರವಾಗಿ ಆಸಕ್ತರು ಅರ್ಜಿಗಳನ್ನು ನೀಡಿದಲ್ಲಿ ಪರಿಶೀಲಿಸಿ ಅಗತ್ಯ ಕ್ರಮವಿಡಲಾಗುವುದು.<br><br>3. ಅರ್ಜಿದಾರರ ಮಾರಾಟ ಕೌಶಲ್ಯತೆ ಸ್ಥಳೀಯ ಜನಸಾಮಾನ್ಯರೊಂದಿಗೆ ಒಡನಾಟ ಹಾಗೂ ಬಂಡವಾಳವನ್ನು ಭರಿಸುವ ಸಾಮರ್ಥ್ಯಕ್ಕೆ ಅನುಗುಣವಾಗಿ ನೇಮಕ ಮಾಡಲಾಗುವುದು.<br><br>4. ಆಸಕ್ತರು ಆಯ್ದ ಸ್ಥಳಗಳಲ್ಲಿ ಬಂಡವಾಳ ಹೂಡಿ ಇತರೆ ಉತ್ಪನ್ನಗಳೊಂದಿಗೆ ನಂದಿನಿ ಉತ್ಪನ್ನಗಳನ್ನು ಮಾರಾಟ ಮಾಡಬೇಕಾಗುತ್ತದೆ.<br><br>5. ಪಾರ್ಲರ್/ಫ್ರಾಂಚೈಸಿಗಳಿಗೆ ಬ್ರಾಂಡಿಂಗ್‌ನ್ನು ಮಾಡಿಸುವುದು ಹಾಗೂ ರಿಯಾಯತಿ ದರದಲ್ಲಿ ಫ್ರೀಜರ್ ಮತ್ತು ಕೂಲರ್ ವ್ಯವಸ್ಥೆ ಹಾಲು ಒಕ್ಕೂಟಗಳು ಹಾಗೂ ಕೆ.ಎಂ.ಎಫ್ ಸಂಸ್ಥೆಯಿಂದ ಮಾಡಲಾಗುವುದು. |

| ಇ) | ನಂದಿನಿ ಬೂತ್/ಪಾರ್ಲರ್ ಗಳನ್ನು ಎಷ್ಟು ಕಿ.ಮೀ.,ಗೆ ಅಂತರದಲ್ಲಿ ನಗರ/ಗ್ರಾಮೀಣ ಭಾಗದಲ್ಲಿ ಸ್ಥಾಪಿಸಲು ಅವಕಾಶವಿದೆ; ಇದಕ್ಕೆ ಇರುವ ಮಾನದಂಡಗಳೇನು; (ವಿವರ ನೀಡುವುದು) | ನಗರ ಪ್ರದೇಶಗಳಲ್ಲಿ ಒಂದು ಅಥವಾ ಎರಡು ಕಿ.ಮೀ.ಗೆ ಒಂದರಂತೆ ಆಯಾ ಸ್ಥಳದ ಬೇಡಿಕೆ ಮತ್ತು ಜನಸಂಖ್ಯೆ ಆಧಾರದ ಮೇಲೆ ಬೂತ್ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು.<br><br>ಗ್ರಾಮೀಣ ಪ್ರದೇಶಗಳಲ್ಲಿ ಹಾಲು ಮತ್ತು ಹಾಲಿನ ಉತ್ಪನ್ನಗಳ ಮಾರಾಟಕ್ಕೆ ಬೇಡಿಕೆ/ಅವಕಾಶಗಳ ಅನುಸಾರವಾಗಿ ನಂದಿನಿ ಪಾರ್ಲರ್‌ಗಳನ್ನು ಸ್ಥಾಪಿಸಲು ಅವಕಾಶವಿದ್ದು, ಅಂತರವನ್ನು ನಿಗದಿಪಡಿಸಿರುವುದಿಲ್ಲ. |
|---|---|---|
| ಈ) | ಈ ನಂದಿನಿ ಬೂತ್/ಪಾರ್ಲರ್ ಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು? (ಬೂತ್ /ಪಾರ್ಲರ್‌ಗಳವಾರು ತಾಲ್ಲೂಕುವಾರು ಮಾಹಿತಿ ನೀಡುವುದು) | ನಂದಿನಿ ಬೂತ್/ಪಾರ್ಲರ್‌ಗಳಿಂದ ಸರ್ಕಾರಕ್ಕೆ ಯಾವುದೇ ಆದಾಯ ಇರುವುದಿಲ್ಲ.<br><br>ಕಲಬುರಗಿ ಹಾಲು ಒಕ್ಕೂಟಕ್ಕೆ ನಂದಿನಿ ಬೂತ್/ ಪಾರ್ಲರ್‌ಗಳ ಮಾಹೆಯಾನ ರೂ.32.40 ಲಕ್ಷ ವಹಿವಾಟಿನಲ್ಲಿ ಶೇ.10 ರಷ್ಟು ಲಾಭವಿರುತ್ತದೆ.<br><br>ನಂದಿನಿ ಬೂತ್ / ಪಾರ್ಲರ್‌ಗಳವಾರು ತಾಲ್ಲೂಕುವಾರು ಮಾಹಿತಿ ಕೆಳಕಂಡಂತಿದೆ.<br>(ರೂ.ಲಕ್ಷಗಳಲ್ಲಿ) |

| ಕ್ರ. ಸಂ. | ತಾಲ್ಲೂಕಿನ ಹೆಸರು | ಬೂತ್ ಸಂಖ್ಯೆ | ವಹಿವಾಟು | ಲಾಭ |
|---|---|---|---|---|
| 1 | ಬೀದರ್ | 25 | 584.5 | 5.85 |
| 2 | ಔರದ್ | 05 | 102 | 1.02 |
| 3 | ಭಾಲ್ಕಿ | 10 | 218 | 2.18 |
| 4 | ಹುಮನಾಬಾದ್ | 06 | 151 | 1.51 |
| 5 | ಬಸವಕಲ್ಯಾಣ | 04 | 53.3 | 0.53 |
| **ಒಟ್ಟು** | | **50** | **1108.8** | **11.09** |

ಕಡತ ಸಂಖ್ಯೆ: ಸಿಒ 59 ಸಿಸಿಬಿ 2021

ಎಸ್.ಟಿ. ಸೋಮಶೇಖರ್

**(ಎಸ್. ಟಿ. ಸೋಮಶೇಖರ್)**

ಸಹಕಾರ ಸಚಿವರು.